## ದಿನಾಂಕ: 06/02/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-140 ಚಾಮರಾಜಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:

| ಕ್ರ. ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀಮತಿ. ಶಶಿಕಲಾ. ಎಸ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು. ವಾರ್ಡ್ ಸಂಖ್ಯೆ-140 |
| 3 | ಶ್ರೀ. ಅಶೋಕ್. ಜಿ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ-140 |
| 4 | ಶ್ರೀ. ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ-140 |
| 5 | ಶ್ರೀಮತಿ. ಶೈಲಜಾ ಎ.ಟಿ | ಸಹಾಯಕ ಅಭಿಯಂತರರು (ವಿದ್ಯುತ್) |
| 6 | ಶ್ರೀ. ಚಂದ್ರಶೇಖರ್ | ಎ.ಎಸ್.ಐ ಚಾಮರಾಜಪೇಟೆ |
| 7 | ಶ್ರೀ. ಎಸ್. ರಮೇಶ್ | ಎ.ಎಸ್.ಐ ಚಾಮರಾಜಪೇಟೆ |
| 8 | ಶ್ರೀ. ವಿಜಯ್ ಕುಮಾರ್ | ಕಂಟ್ರಾಕ್ಟರ್ |
| 9 | ಶ್ರೀ. ಸಂತೋಷ್ ಕುಮಾರ್.ಎಸ್ | ಮಾರ್ಷಲ್, ವಾರ್ಡ್ ಸಂಖ್ಯೆ-140 |
| 10 | ಶ್ರೀಮತಿ. ಗಂಗಮ್ಮ. ಎಸ್ | Link Worker , SWM |
| 11 | ಶ್ರೀಮತಿ. ಪಾರ್ವತಿ. ಜಿ | Link Worker, SWM |
| 12 | ಶ್ರೀ. ಸಂಜೀವ್ ಕುಮಾರ್ | SD, ವಾರ್ಡ್ ಸಂಖ್ಯೆ-140 |
| 13 | ಶ್ರೀ. ನಟರಾಜ್ | ಸ್ಥಳೀಯ ನಾಗರೀಕರು |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಚರ್ಚಿಸಿದ ವಿಷಯಗಳು:

| ಕ್ರ. ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸಮರ್ಪಕವಾಗಿ ನಿರ್ವಹಣೆ ಆಗದಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸದಿರುವ ಬಗ್ಗೆ ಸ್ಥಳೀಯ ಮುಖಂಡರು ಹಾಗೂ ಸದಸ್ಯರು ಸಭೆಯಲ್ಲಿ ದೂರು ನೀಡಿದರು. ಈ ಬಗ್ಗೆ ಅಧ್ಯಕ್ಷರು ಪರಿಶೀಲಿಸಿದಾಗ ಈ ಕೆಳಕಂಡ ಅಂಶಗಳ ಬಗ್ಗೆ ಕ್ರಮವಹಿಸುವಂತೆ ತಿಳಿಸಿದರು.<br>1. ವಾರ್ಡ್ ವ್ಯಾಪ್ತಿಗೆ ಘನತ್ಯಾಜ್ಯ ನಿರ್ವಹಣೆಗಾಗಿ ಕಾರ್ಯಾದೇಶದಲ್ಲಿ ನಿಗದಿಪಡಿಸಿರುವ ಕಡಿಮೆ Auto Tipper ಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ. | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ವಿಭಾಗ |

...ಪ್ರ.ತಿ.ನೋ

| | | | |
|---|---|---|---|
| | | 1. ಪ್ರತಿನಿತ್ಯ Door to Door Collection ಸಮರ್ಪಕವಾಗಿ ನಿರ್ವಹಿಸದಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಹಲವಾರು Black Spot ಉತ್ಪತ್ತಿಯಾಗುತ್ತಿರುವ ಬಗ್ಗೆ.<br>2. ಪ್ರತಿನಿತ್ಯ ಸಾರ್ವಜನಿಕರು ಹಸಿತ್ಯಾಜ್ಯ ಒಣತ್ಯಾಜ್ಯ ವಿಂಗಡಣೆ ಮಾಡಿ ನೀಡಿದ್ದರು ಪೌರ ಕಾರ್ಮಿಕರು ಮತ್ತು Auto, Tipper ಚಾಲಕರು ಹಸಿತ್ಯಾಜ್ಯ ಒಣತ್ಯಾಜ್ಯ ಒಟ್ಟಾಗಿ ಸಂಗ್ರಹಿಸುತ್ತಿರುವ ಬಗ್ಗೆ. | |
| 2 | ಚಾಮರಾಜಪೇಟೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ Streetlight Auto timer ಅಳವಡಿಸುವ ಬಗ್ಗೆ | ಪ್ರಸ್ತುತ ಬೀದಿದೀಪಗಳನ್ನು On/Off ಮಾಡಲು ವಾರ್ಡ್ ವ್ಯಾಪ್ತಿಯ ಹಲವು Pointಗಳಲ್ಲಿ Hook System ಕಾರ್ಯನಿರ್ವಹಿಸುತ್ತಿದ್ದು ಇದರ ಬದಲಾಗಿ Auto Timer ಅಳವಡಿಸಲು ಇದಕ್ಕೆ ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ರವರೊಂದಿಗೆ ದೂರವಾಣಿ ಮೂಲಕ ಚರ್ಚಿಸಿ ಕಾರ್ಯಪಾಲಕ ಅಭಿಯಂತರರು Auto Timer ಅಳವಡಿಸುವ ಕಾರ್ಯವು ವಿಳಂಬವಾಗುವ ಹಿನ್ನಲೆಯಲ್ಲಿ ಬೀದಿದೀಪಗಳನ್ನು On/Off ಮಾಡಲು Switch ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸಲಾಗುವುದೆಂದು ತಿಳಿಸಿದರು. | ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ |
| 3 | ಬೀದಿಬದಿ ವ್ಯಾಪಾರಿಗಳಿಂದ ಚಾಮರಾಜಪೇಟೆ ಮುಖ್ಯರಸ್ತೆಯಲ್ಲಿ ವಾಹನ ದಟ್ಟಣೆ ಹಾಗೂ ರಸ್ತೆ ಅಪಘಾತ ಸಂಭವಿಸುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. | ಈ ಬಗ್ಗೆ ಸಭೆಯಲ್ಲಿ ಎಲ್ಲಾ ಸಂಬಂಧಪಟ್ಟ ಇಲಾಖೆಗಳಾದ ಕಾಮಗಾರಿ, ಆರೋಗ್ಯ, ಘನತ್ಯಾಜ್ಯ, ಪೊಲೀಸ್ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ವಿಭಾಗದವರು ಒಟ್ಟಾಗಿ ದಿನಾಂಕ ನಿಗಧಿಪಡಿಸಿ ತೆರವು ಕಾರ್ಯಾಚರಣೆ ಕೈಗೊಳ್ಳಲು ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:140, ಆರೋಗ್ಯ ವೈದ್ಯಾಧಿಕಾರಿ(ಚಾಮರಾಜಪೇಟೆ ವಿಭಾಗ), ಸಹಾಯಕ ಕಾರ್ಯಪಾಲಕ ಅಭಿಯಂತರರು (SWM), ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ವಿಭಾಗ |
| 4 | ವಾರ್ಡ್-140 ವ್ಯಾಪ್ತಿಯ ಕೆಂಪಾಂಬುಧಿ ಕೆರೆಯ ಪಕ್ಕದ ರಸ್ತೆ ಬದಿಯಲ್ಲಿ ಅನಧಿಕೃತವಾಗಿ ತ್ಯಾಜ್ಯವನ್ನು ಹಾಗೂ Debris ನ್ನು ಸುರಿಯುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. | ಈ ವಿಷಯಕ್ಕೆ ಸಂಬಂಧಿಸಿದಂತೆ ಕೆಂಪಾಂಬುಧಿ ಕೆರೆಯ ಪಕ್ಕದ ರಸ್ತೆ ಬದಿಯಲ್ಲಿ ಅನಧಿಕೃತವಾಗಿ ತ್ಯಾಜ್ಯವನ್ನು ಹಾಗೂ Debris ನ್ನು ಸುರಿಯುತ್ತಿರುವುದನ್ನು ತಡೆಗಟ್ಟಲು ಪೊಲೀಸ್ ಇಲಾಖೆ ಸಹಯೋಗದ ಜೊತೆ ಜಂಟಿಯಾಗಿ ಕಡ್ಡಾಯವಾಗಿ ಈ ಪ್ರದೇಶದಲ್ಲಿ Night Patroling ಮಾಡಲು ಹಾಗೂ ಈಗಾಗಲೇ ಸಂಗ್ರಹವಾಗಿರುವ Debris ಮತ್ತು ತ್ಯಾಜ್ಯವನ್ನು ತೆರವುಗೊಳಿಸಲು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್ 140, ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ವಿಭಾಗ |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 140 ಚಾಮರಾಜಪೇಟೆ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ರವರ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ವಾರ್ಡ್ ಸಂಖ್ಯೆ: 140 ಚಾಮರಾಜಪೇಟೆ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.